ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
ಡಿಜಿಟಲ್ ನ್ಯೂಸ್ ಕಹಾನಿ
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:144 Date:24-06-2026 Wednesday RNI NO : KARKAN/2021/80805 L2/RNP-1285/TMR/2025-27 Page :4 Price: 1.00
ಸಂಪುಟ: 05 ಸಂಚಿಕೆ: 144 ಪುಟ : 4 ಬೆಲೆ: 1.00 ರೂ

## ಸಣ್ ಸುದ್ದಿ



'ಡಿಜಿ ಮತ್ತು ಐಜಿಪಿ ರವರ ಬಹುಮಾನ ಪದಕ' ಭಾಜನರಾದ ತಿಲಕ್ ಪಾರ್ಕ್ ಪೊಲೀಸ್ ಠಾಣಾ ವೃತ್ತದ ಇನ್ಸ್‌ಪೆಕ್ಟರ್ ಆದ ಎಫ್.ಕೆ.ನದಾಫ್ ಮತ್ತು ಶಿರಾ ಪೊಲೀಸ್ ವೃತ್ತದ ಇನ್ಸ್‌ಪೆಕ್ಟರ್ ಆದ ಡಿ.ಜಿ ಶ್ರೀನಿವಾಸ್ . ರವರಗಳನ್ನ ಮಾನ್ಯ ಪೊಲೀಸ್ ಅಧೀಕ್ಷಕರಾದ ಅಶೋಕ್ ಕೆ.ವಿ ಅಭಿನಂದಿಸಿದರು.



## ಕ್ರಾಸ್ ವೋಟಿಂಗ್ ಸಂಬಂಧ ಜೂನ್ 25ರ ಒಳಗೆ ತುರ್ತಾಗಿ ಸಂಪೂರ್ಣ ವರದಿ ನೀಡಲು ಹೈಕಮಾಂಡ್ ಸೂಚನೆ

ಸೂರ್ಯಪ್ರಗತಿನ್ಯೂಸ್.ಕಾಂ

ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರಿಂದ ಅಡ್ಡಮತದಾನ ವಿಚಾರ ಸಂಬಂಧ ವಿಪಕ್ಷ ನಾಯಕ ಆರ್. ಅಶೋಕ್ ಮತ್ತು ರಾಜ್ಯ ಬಿಜೆಪಿ ಅಧ್ಯಕ್ಷರನ್ನು ದೆಹಲಿಗೆ ಕರೆಸಿಕೊಂಡಿದ್ದ ಹೈಕಮಾಂಡ್ ಮಹತ್ವದ ಸೂಚನೆ ನೀಡಿದೆ. ಕ್ರಾಸ್ ವೋಟಿಂಗ್ ಸಂಬಂಧ ಜೂನ್ 25ರ ಒಳಗೆ ತುರ್ತಾಗಿ ಸಂಪೂರ್ಣ ವರದಿ ನೀಡಲು ಸಿ.ಟಿ.ರವಿ ಸಮಿತಿಗೆ ಸೂಚಿಸಿದೆ. ಈ ಸಂಬಂಧ ಅಶೋಕ್ ಮತ್ತು ವಿಜಯೇಂದ್ರ ಅವರಿಗೆ ಸ್ಪಷ್ಟ ಮಾಹಿತಿಯನ್ನು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್






ರವಾನಿಸಿದ್ದಾರೆ.

ವರದಿಯಲ್ಲಿ ಅಡ್ಡಮತದಾನ ಮಾಡಿದ ಶಾಸಕರ ಹೆಸರು ಸಮೇತ ಮಾಹಿತಿ ನೀಡುವ ಜೊತೆಗೆ ಕ್ರಾಸ್ ವೋಟಿಂಗ್ ಮಾಡಿದ ಕಾರಣವನ್ನೂ ವಿವರವಾಗಿ ನೀಡುವಂತೆ ನಿತಿನ್ ನಬಿನ್ ರಾಜ್ಯ ಘಟಕಕ್ಕೆ ಸೂಚಿಸಿದ್ದಾರೆ. ಪ್ರಕರಣವನ್ನು ಬಿಜೆಪಿ ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದ್ದು, ಸಮಿತಿ ನೀಡುವ ವರದಿ ಆಧರಿಸಿ ತುರ್ತು ಕ್ರಮ ಕೈಗೊಳ್ಳಲು ನಿರ್ಧರಿಸಿದೆ ಎನ್ನಲಾಗಿದೆ.

ಮತ್ತೊಂದೆಡೆ ಸಾಂದರ್ಭಿಕ ಸಾಕ್ಷಿ ಮತ್ತು ಹೇಳಿಕೆ ಪರಾಮರ್ಶಿಸಿ ಸಿ.ಟಿ.ರವಿ ನೇತೃತ್ವದ ಸಮಿತಿ ಪ್ರಾಥಮಿಕ ವರದಿ ಸಿದ್ಧಪಡಿಸಲಿದ್ದು, ದೆಹಲಿಯಿಂದ ಸೂಚನೆ ಬಂದರೆ ಇಂದೇ ಪ್ರಾಥಮಿಕ ಮಾಹಿತಿ ರವಾನೆ ಸಾಧ್ಯತೆ ಇದೆ. ಇಲ್ಲದಿದ್ದರೆ ಬಿವೈ ವಿಜಯೇಂದ್ರ ದೆಹಲಿಯಿಂದ ಹಿಂತಿರುಗಿದ ಬಳಿಕ ವರದಿ ಸಲ್ಲಿಕೆ ನಡೆಯಲಿದೆ. ಆದರೆ ಅಡ್ಡ ಮತದಾನ ಮಾಡಿದವರ ಹೆಸರು ಉಲ್ಲೇಖಿಸುವುದು ಕಷ್ಟಸಾಧ್ಯದ ವಿಚಾರವಾಗಿದ್ದು, ಬಹುತೇಕ ಎಲ್ಲಾ ಶಾಸಕರನ್ನು ದೂರವಾಣಿ ಮೂಲಕ ಅದಾಗಲೇ ಸಮಿತಿ ಸಂಪರ್ಕಿಸಿದೆ. ಜೂನ್ 25ರೊಳಗೆ ವರದಿ ಸಲ್ಲಿಸುವಂತೆ ಸಮಿತಿಗೆ ಜೂನ್ 19ರಂದೇ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಆದೇಶಿಸಿದ್ದರು.

ಸ್ವಪಕ್ಷೀಯ ಕೆಲ ನಾಯಕರಿಂದ ವಿರೋಧ ವ್ಯಕ್ತವಾದ ಬೆನ್ನಲ್ಲೇ ಶ್ರೀಕ್ಷೇತ್ರ ಧರ್ಮಸ್ಥಳದಲ್ಲಿ ಶಾಸಕರ ಆಣೆ ಪ್ರಮಾಣ ನಿರ್ಧಾರದಿಂದಲೂ ಬಿಜೆಪಿ ಹಿಂದೆ ಸರಿದಿದೆ. ಎಂಎಲ್‌ಸಿ ಚುನಾವಣೆಯಲ್ಲಿ ನಡೆದ ಅಡ್ಡಮತದಾನದ ಕುರಿತು ಧರ್ಮಸ್ಥಳದಲ್ಲಿ ಬಿಜೆಪಿ ಶಾಸಕಾಂಗ ಸಭೆ ನಡೆಸುವುದಿಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದ್ದಾರೆ. ಧರ್ಮಸ್ಥಳವನ್ನು ರಾಜಕೀಯ ಕ್ಷೇತ್ರ ಮಾಡುವುದು ಬೇಡ ಎಂದು ಸ್ಪಷ್ಟಪಡಿಸಿದ ಅವರು, ಪಕ್ಷದ ಆಂತರಿಕ ವಿಚಾರಗಳನ್ನು ಪಕ್ಷದ ವೇದಿಕೆಯಲ್ಲಿಯೇ ಚರ್ಚಿಸಲಾಗುವುದು ಎಂದು ತಿಳಿಸಿದ್ದಾರೆ.

## ಬಿಡದಿ ಟೌನ್ ಶಿಪ್ ವಿಚಾರದಲ್ಲಿ ಸಕಾರಾತ್ಮಕ ಸಲಹೆಯ ಬದಲಿಗೆ ಕೇಂದ್ರ ಸಚಿವ ಕುಮಾರಸ್ವಾಮಿಯಿಂದ ರಾಜಕೀಯ ಟೀಕೆ; ಡಿಸಿಎಂ

ಸೂರ್ಯಪ್ರಗತಿನ್ಯೂಸ್.ಕಾಂ

ನಮ್ಮ ಸರ್ಕಾರಕ್ಕೆ ರೈತರ ಒಕ್ಕಲೆಬ್ಬಿಸುವ ಯೋಚನೆ ಇಲ್ಲ. ರೈತರ ಅಹವಾಲುಗಳನ್ನು ಆಲಿಸಿ, ಸಮಾಧಾನ ಪಡಿಸಲು, ಸಂಧಾನದ ಮೂಲಕ ಯೋಜನೆಯನ್ನು ಜಾರಿ ಮಾಡಲು ಸರ್ಕಾರ ಪ್ರಯತ್ನ ಮಾಡುತ್ತಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬಿಡಿದಿ ಟೌನ್ ಶಿಪ್ ವಿಚಾರದಲ್ಲಿ ಕುಮಾರಸ್ವಾಮಿ ಅವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬರೆದಿರುವ ಪತ್ರದ ಸಂಬಂಧ ಉತ್ತರಿಸಿದ ಅವರು, ಸಿಎಂ ಅವರು ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಪತ್ರ ಬರೆದಿದ್ದಾರೆ, 26ರಂದು ಬೆಳಿಗ್ಗೆ 11 ಗಂಟೆಗೆ ನಮ್ಮ ಸಚಿವರು ಮತ್ತು ಅಧಿಕಾರಿಗಳೆಲ್ಲ ವಿಧಾನಸೌಧದಲ್ಲಿ ಇರುತ್ತೇವೆ, ನಿಮಗೆ ಯಾರೆಲ್ಲ ಅಧಿಕಾರಿಗಳೆಲ್ಲರ ಸಹಕಾರ ಬೇಕು ಅವರ ಜೊತೆ ಬನ್ನಿ, ಸಾಧಕ – ಬಾಧಕಗಳನ್ನು ಚರ್ಚೆ ಮಾಡೋಣ ಎಂದು ಕರೆದಿದ್ದಾರೆ. ಆ ಪತ್ರವನ್ನು ನಾನು ಸಹ ನೋಡಿದ್ದೀನಿ. ಅದಕ್ಕೆ ಅವರು ಪ್ರತಿಯಾಗಿ ಉತ್ತರ ಕೊಟ್ಟಿದ್ದಾರೆ. ನೀವು ಬಿಡದಿಗೆ ಬನ್ನಿ, ಅಲ್ಲಿನ ರೈತರನ್ನು, ಸಂಬಂಧಪಟ್ಟವನ್ನು ಕರೀತೀವಿ, ಅಲ್ಲೇ ಚರ್ಚೆ ಮಾಡೋಣ ಎಂದು ಕರೆದಿದ್ದಾರೆ.



ಆದರೆ 26ಕ್ಕೆ ಬೇಡ, ನನಗೆ ಪೂರ್ವ ನಿಯೋಜಿತ ಕಾರ್ಯಕ್ರಮ ಇದೆ, 27ಕ್ಕೆ ಬನ್ನಿ ಎಂದು ಕುಮಾರಸ್ವಾಮಿ ಅವರು ಕರೆದಿದ್ದಾರೆ. ಇದರ ಬಗ್ಗೆ ಮುಖ್ಯಮಂತ್ರಿಗಳು ಏನು ತೀರ್ಮಾನ ತಗೋತಾರೆ ಎಂಬುದನ್ನು ನೋಡಬೇಕು ಎಂದು ತಿಲಿಸಿದರು.

ಬಿಡದಿ ಟೌನ್ ಶಿಪ್ ಯೋಜನೆ ಬಗ್ಗೆ ಕ್ಯಾಬಿನೆಟ್ ನಲ್ಲಿ ಚರ್ಚೆ ಮಾಡುವ ಸಂಬಂಧ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಈ ಬಗ್ಗೆ ಈಗಾಗಲೇ ಸಂಪುಟದಲ್ಲಿ ಚರ್ಚೆ ಆಗಿದೆ, ಬಿಡಿಎ, ಹಡ್ಕೊ ಇವುಗಳಿಂದ ಯಾವ ರೀತಿ ಅನುದಾನ ಒದಗಿಸಬೇಕು ಎಂಬ ಬಗ್ಗೆ ವಿಸ್ತೃತವಾಗಿ ಚರ್ಚೆ ಆಗಿದೆ. ಆದರೆ ಈ ಯೋಜನೆ ಈಗ ರಾಜಕೀಯ ತಿರುವು ಪಡೆಯುತ್ತಿರುವುದರಿಂದ ಇದನ್ನು ರಾಜಕೀಯದಿಂದ ದೂರ ಇಟ್ಟು ಯಾವ ರೀತಿ ಯೋಜನೆಯನ್ನು ಜಾರಿ ಮಾಡಬೇಕು ಎನ್ನುವ ಬಗ್ಗೆ ಸರ್ಕಾರ, ಮುಖ್ಯಮಂತ್ರಿಗಳು ಎಲ್ಲರೂ ಸೇರಿ ತೀರ್ಮಾನ ಮಾಡುತ್ತೇವೆ.

ಕುಮಾರಸ್ವಾಮಿ ಅವರು ಕಾಂಗ್ರೆಸ್ ನಾಯಕರ ಹಳೆಯ ಹೇಳಿಕೆಗಳನ್ನು ತೋರಿಸಿ, ರಾಜಕೀಯ ಮಾಡಲು ಹೊರಟಿದ್ದಾರೆ. ಅದನ್ನು ಬಿಟ್ಟು ಬಂದು ಅವರು ಸಲಹೆ ನೀಡಲಿ. ಆಗ ನಾವು ಸಹ ಅವರ ಅನುಮಾನಗಳಿಗೆ, ಆರೋಪಗಳಿಗೆ ಸೂಕ್ತ ಉತ್ತರ ನೀಡುತ್ತೇವೆ. ಈ ತೀರ್ಮಾನ ಕೈಗೊಳ್ಳಲು ಕಾರಣವೇನು ಎಂಬುದನ್ನು ಸರ್ಕಾರ ಕೊಡಲು ಸಿದ್ಧವಿದೆ. ಆದರೆ ಕುಮಾರಸ್ವಾಮಿ ಅವರು ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದರೆ ರಾಜಕೀಯ ಕಾರಣಕ್ಕಾಗಿ ಮಾಡುತ್ತೀರಿ ಎಂಬುದನ್ನು ತೋರಿಸುತ್ತದೆ.

**ಹೆಚ್.ಕೆ.ಪಾಟೀಲ್ ಅವರ ನಿವಾಸಕ್ಕೆ ಪರಮೇಶ್ವರ್ ಭೇಟಿ**

ಮಾಜಿ ಸಚಿವರಾದ ಹೆಚ್.ಕೆ.ಪಾಟೀಲ್ ಅವರ ನಿವಾಸದ ಬಳಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು 10 ದಿವಸಗಳಿಂದ ನನ್ನ ಆರೋಗ್ಯ ಸರಿಯಿರಲಿಲ್ಲ. ಅವರು ನನ್ನನ್ನು ನೋಡಲು ಬರುತ್ತೇನೆ ಎಂದು ಹೇಳಿದ್ದರು. ಇಂದು ನಾನೇ ಹೊರಗಡೆ ಬಂದಿದ್ದೆ. ಹೀಗಾಗಿ ನಾನೇ ನಿಮ್ಮನ್ನು ಭೇಟಿ ಮಾಡಲು ಬರುತ್ತೇನೆ ಎಂದು ತಿಳಿಸಿದ್ದೆ. ಸ್ವಾಭಾವಿಕವಾಗಿ, ಔಪಚಾರಿಕವಾಗಿ ಮಾತಾನಾಡಿದ್ದೇವೆ. ಮುಂದೆ ಭವಿಷ್ಯದಲ್ಲಿ ನಾವು ಯಾವ ರೀತಿಯಾಗಿ ಸಂಘಟನೆ ಮಾಡಬೇಕು ಮತ್ತು ಸರ್ಕಾರವನ್ನು ಜನಹಿತವಾಗಿ ನಡೆಸುವುದರಲ್ಲಿ ಏನೇನು ಮಾಡಬೇಕು ಎಂಬುದಾಗಿ ಚರ್ಚೆಯನ್ನು ಮಾಡಿದ್ದೇವೆ ಎಂದರು.

ಇದು ಸಮಾನ ಮನಸ್ಕರ ಭೇಟಿಯೇ ಎಂಬ ಪ್ರಶ್ನೆಗೆ, ನಾವು ಯಾವತ್ತೂ ಅಸಮಾನ ಮನಸ್ಕರಾಗಿಲ್ಲ. ನಾನು ಹೆಚ್.ಕೆ ಪಾಟೀಲ್ ಒಟ್ಟಿಗೆ ಮೊಯ್ಲಿಯವರ ಮಂತ್ರಿ ಮಂಡಲದಲ್ಲಿ ಒಟ್ಟಿಗೆ ಪ್ರಮಾಣವಚನ ಸ್ವೀಕಾರ ಮಾಡಿದ್ದೆವು. ಅಂದಿನಿಂದ ಇಂದಿನವರೆಗೂ ನಮ್ಮಿಬ್ಬರ ಸ್ನೇಹ ಅಪಾರವಾದದ್ದು. ಅದಕ್ಕೂ ಮೊದಲು ಕೆ. ಎಚ್ ಪಾಟೀಲ್ ಇದ್ದರು. ನಾನು ಮೊದಲ ಬಾರಿ ಎಂಎಲ್ಎ ಆದಾಗ ವೀರೇಂದ್ರ ಪಾಟೀಲ್ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಅವರೆಲ್ಲಾ ಸಚಿವ ಸಂಪುಟದಲ್ಲಿದ್ದರು. ಅವರ ಬಗ್ಗೆ ನಮಗೆ ಅಪಾರ ಗೌರವವಿದೆ. ಆಗ ನಾವೆಲ್ಲ ಚಿಕ್ಕವರು. ನಮ್ಮನ್ನು ಏಕವಚನದಲ್ಲೇ ಮಾತನಾಡಿಸುತ್ತಿದ್ದರು. ನಮಗೆ ಅಲ್ಲಿಂದ ಸಂಬಂಧ ಬಂದಿದೆ. ಹಾಗಾಗಿ ಈ ಸಂಬಂಧ ಕೊನೆಯವರೆಗೂ ಉಳಿದುಕೊಂಡು ಹೋಗುತ್ತೆ ಎನ್ನುವ ನನ್ನ ವಿಶ್ವಾಸ ಇದೆ ಎಂದರು.

ಸಚಿವ ಸ್ಥಾನದ ಬಗ್ಗೆ ಈ ಹಿಂದೆ ಹೆಚ್.ಕೆ.ಪಾಟೀಲರು ನೀಡಿರುವ ಹೇಳಿಕೆ ಕುರಿತು ಪ್ರತಿಕ್ರಿಯಿಸುತ್ತಾ, ಪಾಟೀಲ್ ಅವರು ಯಾವತ್ತೂ ನನಗೆ ಮಂತ್ರಿಮಂಡಲದಲ್ಲಿ ನನ್ನನ್ನು ಮಂತ್ರಿ ಮಾಡಿ ಎಂದು ಕೇಳಿದವರಲ್ಲ. ಅವರು ತಮ್ಮ ತಂದೆಯವರನ್ನು ನೋಡಿ ಹಾಗೂ ಆ ಭಾಗದ ಜನರನ್ನು ನೋಡಿ ರಾಜಕೀಯವನ್ನು ಅರ್ಥಮಾಡಿಕೊಂಡಿದ್ದಾರೆ. ರಾಜಕೀಯವಾಗಿ ನಮ್ಮ ಸರ್ಕಾರಕ್ಕೆ ಬಹಳ ಸಂದರ್ಭದಲ್ಲಿ ಇದರಿಂದ ಸಹಾಯವಾಗಿದೆ ಎಂದರಲ್ಲದೇ

ತಮ್ಮ ಆರೋಗ್ಯದ ಬಗ್ಗೆ ಉತ್ತರಿಸಿದ ಉಪ ಮುಖ್ಯಮಂತ್ರಿಗಳು, ಈಗ ಆರೋಗ್ಯ ಶೇ.90 ರಷ್ಟು ಸುಧಾರಣೆಯಾಗಿದೆ. ನಿಮ್ಮ ಸಹಕಾರ – ಪ್ರೀತಿಯಿಂದ ಇನ್ನು ಸ್ವಲ್ಪ ಸಮಯದಲ್ಲಿ ಪೂರ್ಣ ಗುಣಮುಖನಾಗುತ್ತೇನೆ ಎಂದರು

## ಕೊರಟಗೆರೆಯಲ್ಲಿ ವೃದ್ಧೆ ಹತ್ಯೆ: ಕೇರಳದಲ್ಲಿ ತಲೆಮರೆಸಿಕೊಂಡಿದ್ದ ಇಬ್ಬರು ಆರೋಪಿಗಳ ಬಂಧನ

## ಎಸ್ಪಿ ಅಶೋಕ್ ಕೆ.ವಿ ಅವರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ಯಶಸ್ವಿ

ಸೂರ್ಯಪ್ರಗತಿನ್ಯೂಸ್.ಕಾಂ

ಕೊರಟಗೆರೆ:–ತಾಲ್ಲೂಕಿನ ದಾಸಾಲಕುಂಟೆ ಗ್ರಾಮದಲ್ಲಿ 72 ವರ್ಷದ ವೃದ್ಧೆ ರತ್ನಮ್ಮ ಕೋಂ ಮುದ್ದಬಸಪ್ಪ ಅವರನ್ನು ಕೊಲೆ ಮಾಡಿ ಚಿನ್ನಾಭರಣ ದೋಚಿ ಕೇರಳ ರಾಜ್ಯದಲ್ಲಿ ತಲೆಮರೆಸಿಕೊಂಡಿದ್ದ ಇಬ್ಬರು ಆರೋಪಿಗಳನ್ನು ತುಮಕೂರು ಜಿಲ್ಲಾ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಘಟನೆ ವಿವರ: ದಿನಾಂಕ 16.06.2026ರಂದು ಸಾಯಂಕಾಲ 4.45ರ ಸುಮಾರಿಗೆ ರತ್ನಮ್ಮ ಅವರು ತಮ್ಮ ಜಮೀನಿನಲ್ಲಿನ ಕರೆಂಟ್ ರೂಮ್ ಬಳಿ ಇದ್ದಾಗ ಅಪರಿಚಿತರು ಕೈ–ಕಾಲುಗಳನ್ನು ಕಟ್ಟಿಹಾಕಿ, ಬಾಯಿಗೆ ಬಟ್ಟೆಯನ್ನು ತುರುಕಿ ಉಸಿರುಗಟ್ಟಿಸಿ ಕೊಲೆ ಮಾಡಿದ್ದರು. ಮೃತೆಯ ಮೈಮೇಲಿದ್ದ 55 ಗ್ರಾಂ ತೂಕದ ಚಿನ್ನದ ಗುಂಡುಗಳು, ಒಂದು ಜೊತೆ ಚಿನ್ನದ ಓಲೆ ಮತ್ತು ಮೂಗುನತ್ತು ಕಿತ್ತುಕೊಂಡು ಪರಾರಿಯಾಗಿದ್ದರು. ಈ ಸಂಬಂಧ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಆರೋಪಿಗಳ ಬಂಧನ: ಜಿಲ್ಲಾ ಪೊಲೀಸ್ ಅಧೀಕ್ಷಕ ಅಶೋಕ್ ಕೆ.ವಿ ಐಪಿಎಸ್ ಅವರ ಮಾರ್ಗದರ್ಶನದಲ್ಲಿ, ಹೆಚ್ಚುವರಿ ಎಸ್ಪಿಗಳಾದ ಸಿ.ಗೋಪಾಲ್ ಮತ್ತು ಪುರುಷೋತ್ತಮ್ ಎಂ.ಎಲ್ ಅವರ ನೇತೃತ್ವದಲ್ಲಿ, ಮಧುಗಿರಿ ಉಪವಿಭಾಗದ ಡಿವೈಎಸ್ಪಿ ಮಂಜುನಾಥ್ ಅವರ ಮಾರ್ಗಸೂಚನೆಯಲ್ಲಿ ವಿಶೇಷ ತಂಡ ರಚಿಸಲಾಗಿತ್ತು.



ಕೊರಟಗೆರೆ ವೃತ್ತ ನಿರೀಕ್ಷಕ ಪುರುಷೋತ್ತಮ್.ಜಿ, ಮಧುಗಿರಿ ವೃತ್ತ ನಿರೀಕ್ಷಕ ಹನುಮಂತರಾಯಪ್ಪ, ಪಿಎಸ್ಐಗಳಾದ ತೀರ್ಥೇಶ್, ಅಭಿಷೇಕ್, ಸುನಿಲ್ ಐರೋಡಗಿ, ರವೀಂದ್ರ, ಮುತ್ತುರಾಜು ಮತ್ತು ಸಿಬ್ಬಂದಿಗಳಾದ ರಾಮಕೃಷ್ಣಯ್ಯ, ದೊಡ್ಡಲಿಂಗಯ್ಯ, ಗಣೇಶ್, ರಂಜಿತಾ, ನಂದ, ರಂಗನಾಥ್, ಶಶಿಕುಮಾರ್, ಹುಚ್ಚಸ್ವಾಮಿ, ನವೀನ್ ಕುಮಾರ್, ಕಾಂತರಾಜು, ಮಧುಕುಮಾರ್, ರಂಗರಾಜು, ರಮೇಶ್, ರವಿ, ಮೋಹನ್, ವಿಜಯ್ ಕುಮಾರ್, ಸಿದ್ದಲಿಂಗಪ್ಪ ಹಾಗೂ ಜಿಲ್ಲಾ ಪೊಲೀಸ್ ಕಚೇರಿಯ ನರಸಿಂಹರಾಜು ಅವರನ್ನೊಳಗೊಂಡ ತಂಡವು ಕೇರಳ ರಾಜ್ಯದಲ್ಲಿ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ

ಬಂಧಿತ ಆರೋಪಿಗಳು: *ಗಂಗಾಧರ್ ಬಿನ್ ಲೇಟ್ ಮುದ್ದಯ್ಯ*, 24 ವರ್ಷ, ಬಟ್ಟೆ ವ್ಯಾಪಾರ, ಬೆಟ್ಟದ ಹೊಸಹಳ್ಳಿ, ಸೊಂಡುರ ಹೋಬಳಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.

2. *ಸೂರ್ಯ ಬಿನ್ ಲೇಟ್ ಉದಯ್ ಕುಮಾರ್*, 25 ವರ್ಷ, ಅಡಿಗೆ ಕ್ಯಾಟರಿಂಗ್ ಕೆಲಸ, ಮಂಜುನಾಥ ದೇವಸ್ಥಾನದ ಹತ್ತಿರ, ಹೊಸಕೆರೆಹಳ್ಳಿ, ಬೆಂಗಳೂರು. ಆರೋಪಿತರಿಂದ ಕೃತ್ಯಕ್ಕೆ ಬಳಸಿದ ಕೆ.ಟಿ.ಎಂ ಬೈಕ್ ಅನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣ ಭೇದಿಸಿದ ತಂಡವನ್ನು ಎಸ್ಪಿ ಅಶೋಕ್ ಕೆ.ವಿ ಐಪಿಎಸ್ ಅವರು ಪ್ರಶಂಸಿಸಿದ್ದಾರೆ.

## ಡೆತ್ ನೋಟ್ ಬರೆದಿಟ್ಟು ವಿದ್ಯಾರ್ಥಿ ಆತ್ಮಹತ್ಯೆ

ಸೂರ್ಯಪ್ರಗತಿನ್ಯೂಸ್.ಕಾಂ




ತುಮಕೂರು: ನಗರದ ಪ್ರಸಿದ್ಧ ಕಾಲೇಜೊಂದರಲ್ಲಿ ವ್ಯಾಸಂಗ ಮಾಡುತ್ತಿದ್ದ ಇಂಜಿನಿಯರಿಂಗ್ ವಿದ್ಯಾರ್ಥಿಯೊಬ್ಬ ಹಿಂದುಳಿದ ವರ್ಗಗಳ ವಸತಿ ನಿಲಯದಲ್ಲಿ ಸಾವಿಗೆ ಶರಣಾಗಿದ್ದಾನೆ.

ಮೃತರನ್ನು ಮೂಲತಃ ದಾವಣಗೆರೆ ಜಿಲ್ಲೆಯ ದೊಣ್ಣೆಹಳ್ಳಿ ಗ್ರಾಮದ ಜಿ. ಇ ವೆಂಕಟೇಶ್ (25) ಎಂದು ಗುರುತಿಸಲಾಗಿದೆ. ವೆಂಕಟೇಶ್ ತುಮಕೂರು ನಗರದ ಪ್ರಖ್ಯಾತ ಎಸ್ಐಟಿ (ಖಖಖ) ಕಾಲೇಜಿನಲ್ಲಿ ಮೂರನೇ ವರ್ಷದ ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದರು.

ನಗರದ ಉಪ್ಪಾರಹಳ್ಳಿಯಲ್ಲಿರುವ ಬಿಸಿಎಂ ಹಾಸ್ಟೆಲ್‌ನಲ್ಲಿ ಉಳಿದುಕೊಂಡಿದ್ದ ಅವರು, ಕೊಠಡಿಯಲ್ಲಿ ಯಾರೂ ಇಲ್ಲದ ಸಂದರ್ಭವನ್ನು ನೋಡಿಕೊಂಡು ನೇಣು ಬಿಗಿದುಕೊಂಡಿದ್ದಾನೆ. ಇಂದು (ಸೋಮವಾರ) ಬೆಳಿಗ್ಗೆ ಸಹಪಾಠಿಗಳು ಕೊಠಡಿಗೆ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ.

ವಿದ್ಯಾರ್ಥಿ ವೆಂಕಟೇಶ್ ಆತ್ಮಹತ್ಯೆಗೆ ನಿಖರವಾದ ಕಾರಣವೇನೆಂಬುದು ಸದ್ಯಕ್ಕೆ ತಿಳಿದುಬಂದಿಲ್ಲ. ಆದರೆ, ಸಾವಿಗೂ ಮುನ್ನ ಅವರು ತಮ್ಮ ಹೆತ್ತ ಪೋಷಕರು ಹಾಗೂ ಕುಟುಂಬಸ್ಥರನ್ನು ಉದ್ದೇಶಿಸಿ ಭಾವನಾತ್ಮಕ ಡೆತ್ ನೋಟ್ ಒಂದನ್ನು ಬರೆದಿಟ್ಟಿದ್ದಾರೆ.

## ಮಧುಗಿರಿ ತಾಪಂ ನಲ್ಲಿ 4.24 ಕೋಟಿ ಹಣ ಪಂಗನಾಮ ಹಾಕಿದ್ದ ಎಸ್‌ಡಿಎ ಸೌಮ್ಯ,ಪತಿ ರಮೇಶ್ ಬಂಧನ

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ : ತಾಲೂಕು ಪಂಚಾಯಿತಿಯಲ್ಲಿ 4.24 ಕೋಟಿ ಹಣ ದುರುಪಯೋಗ ಆರೋಪದಡಿ ಪ್ರಕರಣ ದಾಖಲಾದ ಎರಡೂವರೆ ತಿಂಗಳ ನಂತರ ಎ1 ಆರೋಪಿ ದ್ವಿತೀಯ ದರ್ಜೆ ಸಹಾಯಕಿ ಸೌಮ್ಯ ಮತ್ತು ಎ2 ಆರೋಪಿ ಸೌಮ್ಯರವರ ಪತಿ ರಮೇಶ್ ರವರನ್ನು ಮಧುಗಿರಿ ಪೋಲೀಸರು ವಶಕ್ಕೆ ಪಡೆದಿದ್ದಾರೆ.

ಮಧುಗಿರಿ ತಾ.ಪಂ ಕಛೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕಿ ಸೌಮ್ಯ ರವರು ನಿವೃತ್ತ ನೌಕರರ ಅಂತಿಮ ಗಳಿಕೆ ರಜೆ ನಗದಿಕರಣ ಬಿಲ್ಲುಗಳನ್ನು ನಗದಿಕರಿಸಿ ತಮ್ಮ ಕುಟುಂಬದ ಸದಸ್ಯರ ವೈಯಕ್ತಿಕ ಬ್ಯಾಂಕ್ ಖಾತೆಗಳಿಗೆ ಸರ್ಕಾರಿ ಹಣವನ್ನು ವರ್ಗಾವಣೆ ಮಾಡಿಕೊಂಡು ಸರ್ಕಾರಕ್ಕೆ ಮೋಸ ಮಾಡಿದ್ದಾರೆ ಎಂಬ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಜಿ.ಪಂ ಸಿಇಒ ಬಿ.ವಿ ಅಶ್ವಿಜಾ ಅಮಾನತ್ತು ಮಾಡಿ ಆದೇಶಿಸಿದ್ದರು.

ಏನಿದು ಪ್ರಕರಣ..? : ಮಧುಗಿರಿ ತಾ.ಪಂ ಕಛೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕಿ ಸೌಮ್ಯ ರವರು ನಿವೃತ್ತ ನೌಕರರ ಅಂತಿಮ ಗಳಿಕೆ ರಜೆ ನಗದಿಕರಣ ಬಿಲ್ಲುಗಳನ್ನು ನಗದಿಕರಿಸಿ ತಮ್ಮ ಕುಟುಂಬದ ಸದಸ್ಯರ ವೈಯಕ್ತಿಕ ಬ್ಯಾಂಕ್ ಖಾತೆಗಳಿಗೆ ಸರ್ಕಾರಿ ಹಣವನ್ನು ವರ್ಗಾವಣೆ ಮಾಡಿಕೊಂಡು ಸರ್ಕಾರಕ್ಕೆ ಮೋಸ ಮಾಡಿದ್ದಾರೆ ಎಂಬ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಸರ್ಕಾರಿ ನೌಕರನ ಅಂತಿಮ ಗಳಿಕೆ ರಜೆಗಳನ್ನು ಪಾವತಿಸುವಲ್ಲಿ ರೂ. 4.24 ಕೋಟಿ ರೂ.ಗಳನ್ನು ಅನುಮಾನಾಸ್ಪದವಾಗಿ ಪಾವತಿಸಿರುವುದು ಕಂಡು ಬಂದಿರುವ ಬಗ್ಗೆ, ವರದಿ ನೀಡಿದ್ದು,



ಪರಿಶೀಲಿಸಲಾಗಿ ಇದರಲ್ಲಿ ಮಂಜುಳಮ್ಮ, ವ್ಯವಸ್ಥಾಪಕರು (ನಿವೃತ್ತ) ಮೊತ್ತ 491730, ರಂಗನಾಥಯ್ಯ ಪಿ, ಕಾರ್ಯದರ್ಶಿ (ನಿವೃತ್ತ) ಪ್ರಸ್ತುತ ಮರಣ ಹೊಂದಿರುತ್ತಾರೆ. ಇವರಿಗೆ ಪಾವತಿಯಾಗಿರುವ ಮೊತ್ತ ರೂ 14850, ನ್ಯಾಯಬದ್ಧ ಪಾವತಿಗಳಾಗಿದ್ದು ಸರಿ ಇರುತ್ತದೆ. ಇದನ್ನು ಹೊರತುಪಡಿಸಿ, ಉಳಿಕೆ 4.19 ಕೋಟಿ ರೂ. ಗಳನ್ನು ಅನುಮಾನಾಸ್ಪದವಾಗಿ ಪಾವತಿಸಿರುವುದು ಕಂಡುಬಂದಿರುತ್ತದೆ.

ಅಮಾನತ್ತು ಗೊಂಡ ಬೆನ್ನಲ್ಲೆ ಪರಿಶೀಲನೆ ಮಾಡಿದ ಇಒ, ತಾ.ಪಂನಲ್ಲಿ ಕರ್ತವ್ಯ ನಿರ್ವಹಿಸಿ ನಿವೃತ್ತರಾದ ಹಾಗೂ ಮರಣ ಹೊಂದಿದ ಸರ್ಕಾರಿ ನೌಕರರ ಗಳಿಕೆ ರಜೆಯನ್ನು ನೌಕರರ ಹೆಸರಿನಲ್ಲಿ ಆನೇಕ ಬಾರಿ ಕಾರ್ಯ ನಿರ್ವಾಹಕ ಅಧಿಕಾರಿಗಳ ಖಜಾನೆ–2 ಲಾಗಿನ್ ಹಾಗೂ ಡಿಜಿಟಲ್ ಸಹಿಯ ಕೀ ಅನ್ನು ಅನಧಿಕೃತವಾಗಿ ನನ್ನ ಗಮನಕ್ಕೆ ತರದೆ ದುರ್ಬಳಕೆ ಮಾಡಿಕೊಂಡು ಗಳಿಗೆ ರಜೆ ನಗದೀಕರಣವನ್ನು ನಮ್ಮ ಕಛೇರಿಯ ಸಿಬ್ಬಂದಿ ಶಾಖೆಯ ಫೆ1 2020 ರಿಂದ ಮಾ31 2025 ವರೆಗೆ ಕುಟುಂಬದ ಸದಸ್ಯರಾದ ರಮೇಶ್, ಜಿ. ಆರ್. ಶಿವಲೀಲ, ಸುಮ ಜಿ. ಆರ್, ಮೀನಾಕ್ಷಿ ಜಿ. ಆರ್, ಹಾಗೂ ಕಛೇರಿಯ ಸಿಬ್ಬಂದಿ ಎಂ. ಎನ್. ಪ್ರವೀಣ್ ಎಂಬುವವರ ವಿವಿಧ ಬ್ಯಾಂಕ್ ಖಾತೆಗಳಿಗೆ ಹಣವನ್ನು ವರ್ಗಾಯಿಸಿರುವುದು ಕಂಡು ಬಂದಿರುತ್ತದೆ.

ಹಣ ಪಾವತಿಯಾಗಿರುವ ಖಾತೆಯ ವಿವರ : ಜಿ.ಆರ್. ರಮೇಶ್ ರವರ ವಿವಿಧ ಬ್ಯಾಂಕ್ ಖಾತೆಗೆ ನಾಲ್ಕು ಬಾರಿ 19749810, 6197020, 2970757, 590440 ರೂಗಳು, ಶಿವಲೀಲಾ 4438080, 4467960, ಎಂ.ಎನ್. ಪ್ರವೀಣ್ ಖಾತೆಗೆ 1231890, ಜಿ.ಆರ್. ಉಮಾ ಖಾತೆಗೆ 1672610, ಜಿ.ಆರ್. ಮೀನಾಕ್ಷಿ ಖಾತೆಗೆ 581850 ಒಟ್ಟು 41900417 ರೂಗಳು ವಿವಿಧ ಖಾತೆಗೆ ಜಾಮಾ ಆಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಎ1 ಸೌಮ್ಯ ಎಸ್.ಡಿ.ಎ , ಎ2 ರಮೇಶ್, ಎ3 ಶಿವಲೀಲಾ, ಎ4 ಪ್ರವೀಣ್, ಎ5 ಸುಮಾ ಜಿ.ಆರ್, ಎ6 ಮೀನಾಕ್ಷಿ ಜಿ.ಆರ್ ಎಂಬುವವರ ವಿರುದ್ಧ ಪ್ರಕರಣ ದಾಖಲಾಗಿತ್ತು. ಈಗ ಪ್ರಕರಣ ದಾಖಲಾದ ಎರಡೂವರೆ ತಿಂಗಳ ನಂತರ ಆರೋಪಿಗಳನ್ನು ಮಧುಗಿರಿ ಪೋಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ನಮ್ಮ ಮೆಟ್ರೋ ಸಂಚಾರದಲ್ಲಿ ತಾಂತ್ರಿಕ ಸಮಸ್ಯೆ; ಅರ್ಧ ಗಂಟೆ ವ್ಯತ್ಯಯ ಪ್ರಯಾಣಿಕರು ಪರದಾಟ



ಬೆಂಗಳೂರು: ನಮ್ಮ ಮೆಟ್ರೋ ನೇರಳೆ ಮಾರ್ಗದ ಸಂಚಾರದಲ್ಲಿ ಮಂಗಳವಾರ ಸಂಜೆ ವ್ಯತ್ಯಯವಾಗಿದ್ದು, ಅರ್ಧ ಗಂಟೆಗಳ ಕಾಲ ರೈಲುಗಳು ಒಂದೇ ನಿಲ್ದಾಣಗಳಲ್ಲಿ ನಿಂತಿವೆ. ಇದರಿಂದ ಪ್ರಯಾಣಿಕರು ಸಾಕಷ್ಟು ತೊಂದರೆ ಅನುಭವಿಸಿದರು.

ನೇರಳೆ ಮಾರ್ಗದ ಒಂದು ರೈಲಿನಲ್ಲಿ ಏಕಾಏಕಿ ತಾಂತ್ರಿಕ ಸಮಸ್ಯೆ ಕಾಣಿಸಿಕೊಂಡಿದೆ. ಹೀಗಾಗಿ, ಆ ಮಾರ್ಗದ ಇತರೆ ರೈಲುಗಳ ಸಂಚಾರ ವ್ಯತ್ಯಯವಾಗಿದೆ. ಶೀಘ್ರದಲ್ಲಿಯೇ ಸಮಸ್ಯೆಯ ಪರಿಹರಿಸಲು ತಾಂತ್ರಿಕ ತಂಡ ಮುಂದಾಗಿದೆ. ಈ ಬಗ್ಗೆ ಬಿಎಂಆರ್‌ಸಿಎಲ್ ಮಾಹಿತಿ ನೀಡಿದೆ. ನೇರಳೆ ಮಾರ್ಗದ ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣದಲ್ಲಿ ಸಂಚರಿಸುತ್ತಿದ್ದ ಒಂದು ರೈಲಿನಲ್ಲಿ ತಾಂತ್ರಿಕ ದೋಷ ಕಂಡುಬಂದಿರುವುದರಿಂದ ರೈಲುಗಳ ಸಂಚಾರದಲ್ಲಿ ವಿಳಂಬ ಉಂಟಾಗಿದೆ.

ನಿಲ್ದಾಣಗಳಲ್ಲಿ ಪ್ರಯಾಣಿಕರ ದಟ್ಟಣೆ ಸಂಜೆಯಾದ ಕೂಡಲೇ ನಮ್ಮ ಮೆಟ್ರೋ ನೇರಳೆ ಮಾರ್ಗ ಪ್ರಯಾಣಿಕರಿಂದ ತುಂಬಿರುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಐಟಿ ಕಂಪನಿಗಳ ಉದ್ಯೋಗಿಗಳು ಕೆಲಸ ಮುಗಿಸಿ ಮನೆಗಳಿಗೆ ತೆರಳಲು ನೇರಳೆ ಮಾರ್ಗದ ರೈಲುಗಳನ್ನು ಅವಲಂಬಿಸಿರುತ್ತಾರೆ. 30 ನಿಮಿಷಕ್ಕೂ ಅಧಿಕ ಕಾಲ ರೈಲು ಸ್ಥಗಿತವಾಗಿರುವುದರಿಂದ ಕಬ್ಬನ್ ಪಾರ್ಕ್, ಎಂಜಿ ರಸ್ತೆ, ಟ್ರಿನಿಟಿ, ಹಲಸೂರು, ಇಂದಿರಾನಗರ ಹಾಗೂ ನಾಡಪ್ರಭು ಕೆಂಪೇಗೌಡ ನಿಲ್ದಾಣ ಮೆಜೆಸ್ಟಿಕ್‌ನಲ್ಲಿ ಪ್ರಯಾಣಿಕರ ದಟ್ಟಣೆ ಕಂಡುಬಂದಿತು.

ಎಂಜಿ ರಸ್ತೆಯಿಂದ ಮಾಗಡಿ ರಸ್ತೆವರೆಗೂ ಸಂಚಾರ ಸ್ಥಗಿತ ಪ್ರಸ್ತುತ ನೇರಳೆ ಮಾರ್ಗದಲ್ಲಿ ಮಾಗಡಿ ರಸ್ತೆ ಮತ್ತು ಚಲ್ಲಘಟ್ಟ ನಡುವೆ ಹಾಗೂ ಎಂ ಜಿ ರಸ್ತೆ ಮತ್ತು ವೈಟ್‌ಫೀಲ್ಡ್ (ಕಾಡುಗೋಡಿ) ರೈಲುಗಳು ಸಂಚರಿಸುತ್ತಿವೆ. ಎಂಜಿ ರಸ್ತೆಯಿಂದ ಮಾಗಡಿ ರಸ್ತೆವರೆಗೂ ಸಂಚಾರ ಸ್ಥಗಿತವಾಗಿದೆ. ಕಬ್ಬನ್ ಪಾರ್ಕ್, ವಿಧಾನಸೌಧ, ಸರ್ ಎಂ ವಿಶ್ವೇಶ್ವರಯ್ಯ ನಿಲ್ದಾಣ, ನಾಡಪ್ರಭು ಕೆಂಪೇಗೌಡ ನಿಲ್ದಾಣ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣಗಳ ನಡುವೆ ರೈಲು ಸೇವೆ ತಾತ್ಕಾಲಿಕವಾಗಿ ಇಲ್ಲ.

